## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ವಿದ್ಯಾರ್ಹತೆಯನ್ನು ಪಿ.ಯು.ಸಿ ವಿದ್ಯಾರ್ಹತೆಗೆ ತತ್ಸಮಾನವೆಂದು ಪರಿಗಣಿಸುವ ಬಗ್ಗೆ.

ಓದಲಾಗಿದೆ:
1) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ: ಸಿಆಸುಇ 147 ಸೇಅನೇ 2014, ದಿನಾಂಕ:27.01.2015.
2) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ:ಸಿಆಸುಇ 81 ಸೇವನೆ 2017, ದಿನಾಂಕ:27/02/2018.
3) ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಬಿಟಿಇ/18/ಇಸಿಎಸ್(3)/2017-18, ದಿನಾಂಕ:14.08.2020.
4) ಸರ್ಕಾರದ ಆದೇಶ ಸಂಖ್ಯೆ: ಇಡಿ 43 ಡಿಟಿಇ 2020, ದಿನಾಂಕ:12.01.2021.
5) ಮೂರು ವರ್ಷಗಳ ಡಿಪ್ಲೊಮಾ ವಿದ್ಯಾರ್ಹತೆಯನ್ನು ಪಿ.ಯು.ಸಿ ವಿದ್ಯಾರ್ಹತೆಗೆ ತತ್ಸಮಾನವೆಂದು ಸ್ಪಷ್ಟೀಕರಣದ ಬಗ್ಗೆ ನೀಡಿರುವ ಸಮಿತಿಯ ವರದಿ ದಿನಾಂಕ:31.03.2021.

****

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸುತ್ತೋಲೆಯಲ್ಲಿ ಅನುಕಂಪದ ಆಧಾರದ ಮೇಲೆ ನೇಮಕಾತಿ – ಪಿ.ಯು.ಸಿ ಕೋರ್ಸ್‌ನ ತತ್ಸಮಾನ ಕೋರ್ಸುಗಳ ಬಗ್ಗೆ, ಎಸ್.ಎಸ್.ಎಲ್.ಸಿ ನಂತರ ಪದವಿ ಪೂರ್ವ ಶಿಕ್ಷಣಕ್ಕೆ ಬದಲಾಗಿ ಐ.ಟಿ.ಐ ಮತ್ತು ಇತರೆ ಮೂರು ವರ್ಷದ ಡಿಪ್ಲೊಮಾ ಕೋರ್ಸ್‌ನ್ನು ಪದವಿ ಪೂರ್ವ ಶಿಕ್ಷಣಕ್ಕೆ (ಪಿ.ಯು.ಸಿ) ತತ್ಸಮಾನವೆಂದು ನೇಮಕಾತಿಯಲ್ಲಿ ಪರಿಗಣಿಸಬಹುದಾಗಿದೆ. ಮುಕ್ತ ವಿಶ್ವವಿದ್ಯಾಲಯಗಳು 10+2 ಪರೀಕ್ಷೆಯನ್ನು ನೇಮಕಾತಿ ಪರಿಗಣಿಸಬಾರದೆಂದು ಸ್ಪಷ್ಟಪಡಿಸಲಾಗಿದೆ. ಅನುಕಂಪದ ಆಧಾರದ ನೇಮಕಾತಿಯನ್ನು ಮಾಡಲು ಅಧಿಕಾರ ಹೊಂದಿರುವ ಎಲ್ಲಾ ಪ್ರಾಧಿಕಾರಿಗಳು ಈ ಅಂಶಗಳನ್ನು ಗಮನದಲ್ಲಿಟ್ಟುಕೊಳ್ಳಬೇಕೆಂದು ಸೂಚಿಸಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ:27.02.2018ರ ಸುತ್ತೋಲೆಯಲ್ಲಿ ಈ ಕೆಳಗಿನಂತೆ ಸ್ಪಷ್ಟ ಪಡಿಸಲಾಗಿದೆ;

**ಕರ್ನಾಟಕ ಪದವಿ ಪೂರ್ವ ಶಿಕ್ಷಣ ಮಂಡಳಿಯು ನಡೆಸುವ ಪಿ.ಯು.ಸಿ. ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳು**

1. ಸಿ.ಬಿ.ಎಸ್.ಇ ಮತ್ತು ಐ.ಎಸ್.ಸಿ. ಮಂಡಳಿಯು ನಡೆಸುವ ಕ್ಲಾಸ್ 12 ಪರೀಕ್ಷೆ.
2. ಇತರೆ ರಾಜ್ಯದ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 12 ಪರೀಕ್ಷೆ.



Scanned with CamScanner

3. ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್(ಎನ್.ಐ.ಓ.ಎಸ್) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್/ಹೆಚ್.ಎಸ್.ಸಿ.
4. ಮೂರು ವರ್ಷಗಳ ಡಿಪ್ಲೊಮಾ ಅಥವಾ 2 ವರ್ಷಗಳ ಐ.ಟಿ.ಐ ಕೋರ್ಸ್ ಅಥವಾ 2 ವರ್ಷಗಳ ವೃತ್ತಿ ಶಿಕ್ಷಣ ಡಿಪ್ಲೊಮಾ (ಜೆ.ಓ.ಸಿ/ಜೆ.ಓ.ಡಿ.ಸಿ/ಜೆ.ಎಲ್.ಡಿ.ಸಿ) ಅಭ್ಯರ್ಥಿಗಳು ಎನ್.ಐ.ಓ.ಎಸ್.ನ ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ(ದೂರಕಲಿಕೆ ಮಾದರಿಯಲ್ಲಿ) ಅಥವಾ ಪದವಿ ಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿಯುಸಿಗೆ ತತ್ಸಮಾನವೆಂದು ಪರಿಗಣಿಸಬಹುದು.

ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಪತ್ರದಲ್ಲಿ ಕರ್ನಾಟಕ ರಾಜ್ಯದ ಡಿಪ್ಲೊಮಾ ಪದವಿ ಪಡೆದಂತಹ ವಿದ್ಯಾರ್ಥಿಗಳಿಗೆ ಲ್ಯಾಟರಲ್ ಎಂಟ್ರಿ ಮೂಲಕ ಬಿ.ಇ ವ್ಯಾಸಂಗದ ಎರಡನೇ ವರ್ಷಕ್ಕೆ (ಮೂರನೇ ಸೆಮಿಸ್ಟರ್‌ಗೆ ಪ್ರವೇಶ ಅವಕಾಶವನ್ನು ಸರ್ಕಾರ ನೀಡಿರುತ್ತಾರೆ) ಡಿಪ್ಲೊಮಾ ವ್ಯಾಸಂಗವು ಎಸ್.ಎಸ್.ಎಲ್.ಸಿ ನಂತರದ ಮೂರು ವರ್ಷದ ಅವಧಿಯ ವ್ಯಾಸಂಗವಾಗಿರುತ್ತದೆ. ಪಿ.ಯು.ಸಿ ವಿದ್ಯಾರ್ಥಿಗಳು ಎರಡು ವರ್ಷದ ವ್ಯಾಸಂಗದ ಅವಧಿಯಲ್ಲಿ ಆಂಗ್ಲ ಭಾಷೆ ಹಾಗೂ ಕನ್ನಡ ಭಾಷೆಯನ್ನು ಅಭ್ಯಾಸ ಮಾಡಿರುತ್ತಾರೆ. ಡಿಪ್ಲೊಮಾ ವಿದ್ಯಾರ್ಥಿಗಳು ಮೂರು ವರ್ಷ ವ್ಯಾಸಂಗದ ಅವಧಿಯಲ್ಲಿ ತಮ್ಮ ವಿಭಾಗದ ಪಠ್ಯ ವಿಷಯಗಳ ಜೊತೆ ಕನ್ನಡ ಭಾಷೆ ಹಾಗೂ ಆಂಗ್ಲ ಭಾಷೆಯನ್ನು ಅಭ್ಯಾಸ ಮಾಡಿ ಉತ್ತೀರ್ಣರಾಗಿರುತ್ತಾರೆ. ಮೇಲೆ (2)ರಲ್ಲಿ ಓದಲಾದ ಕ್ರಮ ಸಂಖ್ಯೆ:04ರಲ್ಲಿ 'ಮೂರು ವರ್ಷಗಳ ಡಿಪ್ಲೊಮಾ ಅಥವಾ 2 ವರ್ಷಗಳ ಐ.ಟಿ.ಐ ಕೋರ್ಸ್ ಅಥವಾ 2 ವರ್ಷಗಳ ವೃತ್ತಿ ಶಿಕ್ಷಣ ಡಿಪ್ಲೊಮಾ (ಜೆ.ಓ.ಸಿ/ಜೆ.ಓ.ಡಿ.ಸಿ/ಜೆ.ಎಲ್.ಡಿ.ಸಿ) ಅಭ್ಯರ್ಥಿಗಳು ಎನ್.ಐ.ಓ.ಎಸ್.ನ ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ(ದೂರಕಲಿಕೆ ಮಾದರಿಯಲ್ಲಿ) ಅಥವಾ ಪದವಿ ಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿಯುಸಿಗೆ ತತ್ಸಮಾನವೆಂದು ಪರಿಗಣಿಸಬಹುದು' ಎಂದು ತಿಳಿಸಿರುವುದಕ್ಕೆ ವಿನಾಯಿತಿ ನೀಡಿ, ಮೂರು ವರ್ಷದ ಡಿಪ್ಲೊಮಾ ಉತ್ತೀರ್ಣತೆಯನ್ನು ಹೊಂದಿರುವ ವಿದ್ಯಾರ್ಥಿಗಳಿಗೆ ಪಿ.ಯು.ಸಿ ವಿದ್ಯಾರ್ಹತೆಗೆ ತತ್ಸಮಾನ ವಿದ್ಯಾರ್ಹತೆ ಎಂದು ಪರಿಗಣಿಸಬೇಕೆಂದು ಸ್ಪಷ್ಟ ಅಭಿಪ್ರಾಯವನ್ನು ವ್ಯಕ್ತಪಡಿಸಿ. ಡಿಪ್ಲೊಮಾ ವಿದ್ಯಾರ್ಹತೆಯನ್ನು ಪಿ.ಯು.ಸಿ. ಗೆ ತತ್ಸಮಾನವೆಂದು ಪರಿಗಣಿಸಿದ್ದಲ್ಲಿ ಸಾವಿರಾರು ವಿದ್ಯಾರ್ಥಿಗಳಿಗೆ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಉದ್ಯೋಗ ಲಭ್ಯತೆಯ ಅವಕಾಶಗಳು ಹೆಚ್ಚಾಗುತ್ತದೆ. ಆದ ಕಾರಣ ಡಿಪ್ಲೊಮಾದಾರರ ಔದ್ಯೋಗಿಕ ಹಿತದೃಷ್ಟಿಯಿಂದ ಡಿಪ್ಲೊಮಾ ವಿದ್ಯಾರ್ಹತೆಯನ್ನು ಪಿ.ಯು.ಸಿ ಗೆ ತತ್ಸಮಾನವೆಂದು ಪರಿಗಣಿಸುವಂತೆ ಕೋರಿರುತ್ತಾರೆ.



Scanned with CamScanner

ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಆದೇಶದಲ್ಲಿ ಮೂರು ವರ್ಷಗಳ ಡಿಪ್ಲೊಮಾ ವಿದ್ಯಾರ್ಹತೆಯನ್ನು ಪಿ.ಯು.ಸಿ ವಿದ್ಯಾರ್ಹತೆಗೆ ತತ್ಸಮಾನವೇ ಎಂಬ ವಿಷಯವನ್ನು ನಿರ್ಧರಿಸುವ ಸಂಬಂಧ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಿ, ಆದೇಶಿಸಲಾಯಿತು.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರಲ್ಲಿ ಸಮಿತಿಯು ವಿಸ್ತಾರವಾಗಿ ಚರ್ಚಿಸಿ, ಸಾಧಕ ಬಾಧಕಗಳನ್ನು ಪರಿಗಣಿಸಿ, ಅಭಿಪ್ರಾಯದೊಂದಿಗೆ ದಿನಾಂಕ:31.03.2021ರಂದು ಈ ಕೆಳಕಂಡಂತೆ ಸರ್ಕಾರಕ್ಕೆ ಸಭಾ ನಡವಳಿಯೊಂದಿಗೆ ವರದಿಯನ್ನು ಸಲ್ಲಿಸಲಾಗಿದೆ.

1. ನೇರ ನೇಮಕಾತಿ ಸಂದರ್ಭದಲ್ಲಿ ಸಕ್ಷಮ ಪ್ರಾಧಿಕಾರಿಗಳು ನೇಮಕಾತಿ ಮಾಡಿಕೊಳ್ಳುವಾಗ ಕನಿಷ್ಠ ವಿದ್ಯಾರ್ಹತೆ ಪಿ.ಯು.ಸಿ ಎಂದು ನಮೂದಿಸುವಾಗ ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ಶಿಕ್ಷಣವನ್ನೂ ಸಹ ಕನಿಷ್ಠ ವಿದ್ಯಾರ್ಹತೆ ಎಂದು ನಮೂದಿಸುವುದು.

2. 2015ಕ್ಕಿಂತ ಹಿಂದಿನ ವರ್ಷಗಳಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಹೊಂದಿದ ನಂತರದಲ್ಲಿ ಇಲಾಖಾ ಪರೀಕ್ಷೆಗಳ ಜೊತೆಗೆ ಕನ್ನಡ ಭಾಷಾ ಪರೀಕ್ಷೆಯನ್ನು ತೇರ್ಗಡೆ ಹೊಂದುವುದು ಕಡ್ಡಾಯ ಮಾಡುವುದು.

3. 2015ಕ್ಕಿಂತ ಹಿಂದಿನ ವರ್ಷಗಳಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯನ್ನು ಸಕ್ಷಮ ನೇಮಕಾತಿ ಪ್ರಾಧಿಕಾರದಿಂದ ನಡೆಸುವುದು.

4. 2015ರ ನಂತರ ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆ ಹಾಗೂ ಒಂದು ಐಚ್ಛಿಕ ವಿಷಯದಲ್ಲಿ ತೇರ್ಗಡೆ ಹೊಂದುವುದು ಕಡ್ಡಾಯವಲ್ಲ.

ಮೂರು ವರ್ಷಗಳ ಡಿಪ್ಲೊಮಾ ವಿದ್ಯಾರ್ಹತೆಯನ್ನು ಪಿ.ಯು.ಸಿ ವಿದ್ಯಾರ್ಹತೆಗೆ ತತ್ಸಮಾನವೇ ಎಂಬ ವಿಷಯವನ್ನು ನಿರ್ಧರಿಸುವ ಸಂಬಂಧ ಸಮಿತಿಯು ದಿನಾಂಕ:31.03.2021ರಂದು ನೀಡಿದ ವರದಿಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡ ತೀರ್ಮಾನ ಕೈಗೊಳ್ಳಲಾಯಿತು.

1. ನೇರ ನೇಮಕಾತಿ / ಅನುಕಂಪದ ಆಧಾರದ ನೇಮಕಾತಿ ಹೊಂದಲು ಮತ್ತು ಉನ್ನತ ಶಿಕ್ಷಣ ಪಡೆಯಲು ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ಶಿಕ್ಷಣವನ್ನು ಪಿ.ಯು.ಸಿ. ಗೆ ತತ್ಸಮಾನವೆಂದು ಪರಿಗಣಿಸುವುದು.
2. 2015ಕ್ಕಿಂತ ಹಿಂದಿನ ವರ್ಷಗಳಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ಉತ್ತೀರ್ಣರಾದ ವಿದ್ಯಾರ್ಥಿಗಳು



Scanned with CamScanner

ಕೆ.ಪಿ.ಎಸ್.ಸಿ ಯಿಂದ ನಡೆಸುವ ಇಲಾಖಾ ಪರೀಕ್ಷೆಗಳ ಜೊತೆಗೆ ಕನ್ನಡ ಭಾಷಾ ಪರೀಕ್ಷೆಯನ್ನು ತೇರ್ಗಡೆ ಹೊಂದುವುದು.

ಅದರಂತೆ, ಮೂರು ವರ್ಷಗಳ ಡಿಪ್ಲೊಮಾ ವಿದ್ಯಾರ್ಹತೆಯನ್ನು ಪಿ.ಯು.ಸಿ ವಿದ್ಯಾರ್ಹತೆಗೆ ತತ್ಸಮಾನವೆಂದು ಪರಿಗಣಿಸಲು ತೀರ್ಮಾನಿಸಿ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ : ಇಪಿ 33 ಟಿವಿಇ 2021,**

**ಬೆಂಗಳೂರು, ದಿನಾಂಕ: 30.09.2021**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮೂರು ವರ್ಷಗಳ ಡಿಪ್ಲೊಮಾ ವಿದ್ಯಾರ್ಹತೆಯನ್ನು ಪಿ.ಯು.ಸಿ ವಿದ್ಯಾರ್ಹತೆಗೆ ತತ್ಸಮಾನವೆಂದು ಈ ಕೆಳಕಂಡ ಅಂಶಗಳಿಗೆ ಮಾತ್ರ ಪರಿಗಣಿಸಿ, ಆದೇಶಿಸಿದೆ.

1. ನೇರ ನೇಮಕಾತಿ / ಅನುಕಂಪದ ಆಧಾರದ ನೇಮಕಾತಿ ಹೊಂದಲು ಮತ್ತು ಉನ್ನತ ಶಿಕ್ಷಣ ಪಡೆಯಲು ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ಶಿಕ್ಷಣವನ್ನು ಪಿ.ಯು.ಸಿ.ಗೆ ತತ್ಸಮಾನವೆಂದು ಪರಿಗಣಿಸುವುದು.
2. 2015ಕ್ಕಿಂತ ಹಿಂದಿನ ವರ್ಷಗಳಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಮೂರು ವರ್ಷಗಳ ಡಿಪ್ಲೊಮಾ ಉತ್ತೀರ್ಣರಾದ ವಿದ್ಯಾರ್ಥಿಗಳು ಕೆ.ಪಿ.ಎಸ್.ಸಿ ಯಿಂದ ನಡೆಸುವ ಇಲಾಖಾ ಪರೀಕ್ಷೆಗಳ ಜೊತೆಗೆ ಕನ್ನಡ ಭಾಷಾ ಪರೀಕ್ಷೆಯನ್ನು ತೇರ್ಗಡೆ ಹೊಂದುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

30/9/21

(ಶರಣಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆ(ಸಾಮಾನ್ಯ)

ಗೆ,

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ಇವರಿಗೆ – ಇದನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 100 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ(ಸಾಮಾನ್ಯ), ಕೊಠಡಿ ಸಂಖ್ಯೆ:627, 6ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರಿಗೆ ಕಳುಹಿಸಿಕೊಡಲು ಕೋರಿದೆ.

**ಇವರಿಗೆ:-**

1. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳು.



Scanned with CamScanner

2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01.
3. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
4. ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರು.
5. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ.
6. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ.
7. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003.
8. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
9. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
10. ನಿರ್ದೇಶಕರು, ವೃತ್ತಿ ಶಿಕ್ಷಣ ನಿರ್ದೇಶನಾಲಯ, 3ನೇ ಮಹಡಿ, ಪದವಿ ಪೂರ್ವ ಶಿಕ್ಷಣ ಭವನ, 18ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ,ಬೆಂಗಳೂರು-560 012.
11. ಜಂಟಿ ನಿರ್ದೇಶಕರು, (ಶೈಕ್ಷಣಿಕ) ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003.
12. ಜಂಟಿ ನಿರ್ದೇಶಕರು, (ಪರೀಕ್ಷಾ ವಿಭಾಗ) ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಕ್ರಾಸ್, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-560 003.
13. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
14. ಸರ್ಕಾರದ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ(ಸಚಿವ ಸಂಪುಟ), (ಉಲ್ಲೇಖ: ಸಚಿವ ಸಂಪುಟ ಸಭೆ ಸಂಖ್ಯೆ:3, ಪ್ರಕರಣ ಸಂಖ್ಯೆ:ಸಿ-385/2021, ದಿನಾಂಕ:20.09.2021) ವಿಧಾನಸೌಧ, ಬೆಂಗಳೂರು.
15. ಸರ್ಕಾರದ ಉಪ ಕಾರ್ಯದರ್ಶಿ(ಸಚಿವ ಸಂಪುಟ), 3ನೇ ಮಹಡಿ, ವಿಧಾನಸೌಧ ಬೆಂಗಳೂರು.
16. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಸೇವಾ ನಿಯಮಗಳು-1), ವಿಧಾನಸೌಧ, ಬೆಂಗಳೂರು.
17. ಮಾಹಿತಿ ಕೇಂದ್ರ / ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:-**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಉಪ ಕಾರ್ಯದರ್ಶಿ (ಸೇವೆಗಳು-2) ರವರ ಆಪ್ತ ಸಹಾಯಕರು, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ), ಬಹುಮಹಡಿಗಳ ಕಟ್ಟಡ, ಬೆಂಗಳೂರು.



Scanned with CamScanner